RNU AIR DHARWAD

# JULY 29 2024

# ALL INDIA RADIO- DHARWAD
# PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಖಾದಿ ಬಳಕೆ ಹಾಗೂ ಕೈಮಗ್ಗ ಉತ್ಪನ್ನಗಳಿಗೆ ಪ್ರೋತ್ಸಾಹ ನೀಡುವಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ.
- ಕೇಂದ್ರ ಮುಂಗಡ ಪತ್ರದಲ್ಲಿ ಕರ್ನಾಟಕಕ್ಕೆ ಹೆಚ್ಚಿನ ಅನುದಾನ; ರಾಜ್ಯ ಸರ್ಕಾರದ ಆರೋಪ ನಿರಾಧಾರ – ಸಚಿವೆ ನಿರ್ಮಲಾ ಸೀತಾರಾಮನ್.
- ರಾಜ್ಯದಲ್ಲಿ ಉತ್ತಮ ಮಳೆ; ಕೃ ್ಣರಾಜಸಾಗರ ಮತ್ತು ಕಬಿನಿ ಜಲಾಶಯಗಳಿಗೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಾಗಿನ ಸಮರ್ಪಣೆ.
- ಇಂದು ಅಂತಾರಾಷ್ಟ್ರೀಯ ಹುಲಿ ದಿನ.

ಈಗ ವಾರ್ತೆಗಳ ವಿವರ

ಖಾದಿ ಬಳಕೆ ಹಾಗೂ ಕೈಮಗ್ಗ ಉತ್ಪನ್ನಗಳಿಗೆ ಪ್ರೋತ್ಸಾಹ ನೀಡುವಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. 'ಮನ್ ಕಿ ಬಾತ್' 112ನೇ ಸಂಚಿಕೆಯಲ್ಲಿ ದೇಶವಾಸಿಗಳೊಂದಿಗೆ ಮನದಾಳದ ಮಾತನ್ನು ಹಂಚಿಕೊಂಡ ಅವರು, ದೇಶದ ಬೇರೆ ಬೇರೆ ಭಾಗಗಳಲ್ಲಿರುವ ಕುಶಲಕರ್ಮಿಗಳು ಕೈಮಗ್ಗವನ್ನು ಜನಪ್ರಿಯಗೊಳಿಸುವ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಖಾದಿ ಗ್ರಾಮೋದ್ಯೋಗದ ವಹಿವಾಟು ಮೊದಲ ಬಾರಿಗೆ ಒಂದೂವರೆ ಲಕ್ಷ ಕೋಟಿ ರೂಪಾಯಿ ದಾಟಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಧ್ವನಿ– ಖಾದಿ (52 ಸೆಕೆಂದುಗಳು)

ಯುವ ಪೀಳಿಗೆಯನ್ನು ಕಾಡುತ್ತಿರುವ ಮಾದಕ ದ್ರವ್ಯಗಳ ವ್ಯಸನದ ಬಗ್ಗೆ ಪ್ರಸ್ತಾಪಿಸಿರುವ ಪ್ರಧಾನಿ, ದೇಶವನ್ನು ಮಾದಕ ದ್ರವ್ಯ ಮುಕ್ತವನ್ನಾಗಿಸಲು ಸರ್ಕಾರ ಪಣತೊಟ್ಟಿದೆ. ಮಾದಕ ದ್ರವ್ಯಗಳ ವ್ಯಸನಕ್ಕೆ ಒಳಗಾಗಿರುವವರ ಸಹಾಯಕ್ಕಾಗಿ ಮಾನಸ್ ಸಹಾಯವಾಣಿ ಮತ್ತು ಪೋರ್ಟಲ್ ಆರಂಭಿಸಲಾಗಿದೆ ಎಂದರು.

ಧ್ವನಿ– ಮಾದಕ ( 54 ಸೆಕೆಂದುಗಳು)

ಕಳೆದ ಮನ್ ಕಿ ಬಾತ್ ನಲ್ಲಿ ಪ್ರಧಾನಿ ಅವರು ಪ್ರಸ್ತಾಪಿಸಿದ್ದ 'ಏಕ್ ಪೆಡ್ ಮಾ ಕೆ ನಾಮ್' ಕಾರ್ಯಕ್ರಮ ಯಶಸ್ವಿಯಾಗಿದ್ದು, ದೇಶದ ಹಲವು ಭಾಗಗಳಲ್ಲಿ ಜನ ತಮ್ಮ ತಾಯಿಯ ಹೆಸರಿನಲ್ಲಿ ಗಿಡ ನೆಡುವ ಕಾರ್ಯ ಕೈಗೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಈ ಕಾರ್ಯಕ್ರಮವನ್ನು ಮುಂದುವರೆಸಿ, ತಾಯಿಯ ಹೆಸರಿನಲ್ಲಿ ಮರ ನೆಡುವ ಈ ಅಭಿಯಾನದಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು.

ಧ್ವನಿ– ಏಕ್ ಪೇಡ್ ಮಾಕೆ ನಾಮ್ (29 ಪ್ರಧಾನಿ ಸೆಕೆಂದುಗಳು)

*******

**My Gov** ಅಥವಾ **NaMo** ಅಪ್ಲಿಕೇಶನ್‌ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಸ್ವಾತಂತ್ರ್ಯ ದಿನಾಚರಣೆಯ ಭಾ ʼಣಕ್ಕಾಗಿ ನೀವು ನಿಮ್ಮ ಅಮೂಲ್ಯವಾದ ಸಲಹೆಗಳನ್ನು ಹಂಚಿಕೊಳ್ಳಿ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.
ಪ್ರಜಾಪ್ರಭುತ್ವದ ಹಬ್ಬವಾದ ಹರ್ ಘರ್ ತಿರಂಗಾ ಅಭಿಯಾನದ ಅಂಗವಾಗಿ ಈ ಬಾರಿಯೂ ರಾಷ್ಟ್ರಧ್ವಜವನ್ನು ನಿಮ್ಮ ಮನೆಯ ಮೇಲೆ ಹೆಮ್ಮೆಯಿಂದ ಹಾರಿಸಿ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಿ. ರಾಷ್ಟ್ರಧ್ವಜದೊಂದಿಗಿನ ನಿಮ್ಮ ಸೆಲ್ಫಿಗಳನ್ನು **HarGharTiranga.com**ನಲ್ಲಿ ಅಪ್‌ಲೋಡ್ ಮಾಡಲು ಮರೆಯದಿರಿ ಎಂದು ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ಮನವಿ ಮಾಡಿದ್ದಾರೆ.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

2024-25ನೇ ಸಾಲಿನ, ಕೇಂದ್ರ ಮುಂಗಡ ಪತ್ರದಲ್ಲಿ ಕರ್ನಾಟಕಕ್ಕೆ ಏನೂ ನೀಡಿಲ್ಲ ಎನ್ನುವ ರಾಜ್ಯ ಸರ್ಕಾರದ ಆರೋಪ ನಿರಾಧಾರ. ಯುಪಿಎ ಸರ್ಕಾರ ನೀಡಿದ್ದ ಅನುದಾನಕ್ಕಿಂತಲೂ ಎನ್.ಡಿ.ಎ.ಸರ್ಕಾರ ಅತಿ ಹೆಚ್ಚಿನ ಅನುದಾನ ನೀಡಿದೆ ಎಂದು ಕೇಂದ್ರ ಹಣಕಾಸು ಖಾತೆ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯು.ಪಿ.ಎ. ಸರ್ಕಾರದ 10 ವರ್ಷಗಳ ಅವಧಿಯಲ್ಲಿ ತೆರಿಗೆ ಪಾಲು ಕರ್ನಾಟಕಕ್ಕೆ 81 ಸಾವಿರದ 791 ಕೋಟಿ ರೂಪಾಯಿ ನೀಡಿತ್ತು. ಎನ್.ಡಿ.ಎ. ಸರ್ಕಾರ 10 ವರ್ಷಗಳಲ್ಲಿ 2 ಲಕ್ಷದ 95 ಸಾವಿರದ 818 ಕೋಟಿ ರೂಪಾಯಿ ನೀಡಿದೆ. ಅದೇ ರೀತಿ ಯು.ಪಿ.ಎ. ಸರ್ಕಾರ ಅನುದಾನ ಹಂಚಿಕೆಯಲ್ಲಿ 10 ವರ್ಷಗಳಲ್ಲಿ 60 ಸಾವಿರದ 779 ಕೋಟಿ ರೂಪಾಯಿ ನೀಡಿದರೆ, ಎನ್.ಡಿ.ಎ. ಸರ್ಕಾರ ಕಳೆದ 10 ವರ್ಷಗಳಲ್ಲಿ 2 ಲಕ್ಷ 36 ಸಾವಿರದ 955 ಕೋಟಿ ರೂಪಾಯಿ ನೀಡಿದೆ. ಇದರ ಜೊತೆಗೆ ಪ್ರಸಕ್ತ ಸಾಲಿನಲ್ಲಿ ಸುಮಾರು 10 ಸಾವಿರದ 41 ಕೋಟಿ ರೂಪಾಯಿಯನ್ನು 50 ವರ್ಷಗಳಿಗೆ ಬಡ್ಡಿ ರಹಿತವಾಗಿ ಸಾಲ ನೀಡಲಾಗಿದೆ ಎಂದರು. 'ಪಿಎಂ ಮಿತ್ರಾ ಮೆಘಾ Textile ಪಾರ್ಕ್‌ನ್ನು' ದೇಶದ 7 ಭಾಗಗಳಲ್ಲಿ ಸ್ಥಾಪಿಸಲಾಗುತ್ತಿದೆ. ಅದರಲ್ಲಿ ಕಲಬುರಗಿಯೂ ಒಂದು. ಈ ಯೋಜನೆಗಾಗಿ 200 ಕೋಟಿ ರೂಪಾಯಿ ನೀಡಲಾಗುತ್ತಿದೆ ಎಂದು ತಿಳಿಸಿದರು.

*******

ರಾಜ್ಯದಲ್ಲಿ ಉತ್ತಮ ಮಳೆಯಾಗುತ್ತಿದ್ದು, ಜಲಮೂಲಗಳು ತುಂಬಿ ಹರಿಯುತ್ತಿವೆ. ಕೃ ಣ್ಣರಾಜಸಾಗರ ಮತ್ತು ಕಬಿನಿ ಜಲಾಶಯಗಳು ಭರ್ತಿಯಾಗಿರುವ ಸಮೃದ್ಧಿಯ ಸಂಕೇತದ ಶುಭ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಕಾವೇರಿ ಮಾತೆಗೆ ಪೂಜೆ ಹಾಗೂ ಬಾಗಿನ ಅರ್ಪಿಸಲಿದ್ದಾರೆ. ಕೃ ಣ್ಣರಾಜಸಾಗರ ಜಲಾಶಯಕ್ಕೆ ಬಾಗಿನ ಸಮರ್ಪಣೆ ಕಾರ್ಯಕ್ರಮ ಇಂದು ಬೆಳಗ್ಗೆ 11 ಗಂಟೆಗೆ ಕೃ ಣ್ಣರಾಜಸಾಗರದ ಶ್ರೀ ಕಾವೇರಿ ಮಾತೆ ಪ್ರತಿಮೆಯ ಬಳಿ ಹಾಗೂ ಕಬಿನಿ ಜಲಾಶಯಕ್ಕೆ ಮಧ್ಯಾಹ್ನ 3 ಗಂಟೆಗೆ ಬೀಚನಹಳ್ಳಿಯ ಕಬಿನಿ ಜಲಾಶಯದ ಬಳಿ ನಡೆಯಲಿದೆ ಎಂದು ರಾಜ್ಯ ವಾರ್ತಾ ಇಲಾಖೆ ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ತಿಳಿಸಿದೆ.

ಅತ್ಯಧಿಕ ಮಳೆಯಾಗುತ್ತಿದ್ದ ಕಾರಣ ಹೇಮಾವತಿ ಜಲಾಶಯದ ಒಳಗೆ ಸಾರ್ವಜನಿಕರ ಪ್ರವೇಶ ನಿರ್ಬಂಧಿಸಲಾಗಿತ್ತು. ಇದೀಗ ಮಳೆ ಕಡಿಮೆಯಾದ ಹಿನ್ನೆಲೆ, ಹೊರಹರಿವು ಕಡಿಮೆ ಮಾಡಲಾಗಿದ್ದು ಸಾರ್ವಜನಿಕರ ಪ್ರವೇಶಕ್ಕೆ ಅನುಮತಿ ನೀಡಲಾಗಿದೆ.

ಬೆಳಗಾವಿ ಜಿಲ್ಲೆಯಲ್ಲಿ ವ್ಯಾಪಕ ಮಳೆಯ ಹಿನ್ನೆಲೆಯಲ್ಲಿ ಗೋಕಾಕ ಮತ್ತು ಮೂಡಲಗಿ ತಾಲ್ಲೂಕುಗಳಲ್ಲಿ ಮಾತ್ರ ಅಂಗನವಾಡಿ ಕೇಂದ್ರಗಳು, ಎಲ್ಲ ಸರಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ, ಪ್ರೌಢಶಾಲೆಗಳಿಗೆ ಇಂದು ಹಾಗೂ ನಾಳೆ ಘೋಷಿಸಲಾಗಿರುತ್ತದೆ. ಇನ್ನುಳಿದಂತೆ ನಿಪ್ಪಾಣಿಯ ಸಿದ್ನಾಳ, ಹುನ್ನರಗಿ, ಕುನ್ನೂರ, ಮಮದಾಪುರ ಕೆ.ಎಲ್, ಬಾರವಾಡ, ಕಾರದಗಾ ಗ್ರಾಮಗಳು; ಹುಕ್ಕೇರಿ ತಾಲ್ಲೂಕಿನ ಸಂಕೇಶ್ವರ, ಹೊಸೂರ ಮತ್ತು ಬಡಕುಂದ್ರಿ ಗ್ರಾಮಗಳು.

ಕಾಗವಾಡ ತಾಲ್ಲೂಕಿನ ಜೂಗೂಳ, ಶಾಪುರ, ಮಂಗಾವತಿ, ಕೃ ್ಣ ಕಿತ್ತೂರ, ಕಾತ್ರಾಳ ಮತ್ತು ಬನಜವಾಡ ಗ್ರಾಮಗಳು. ಚಿಕ್ಕೋಡಿ ತಾಲ್ಲೂಕಿನ ಇಂಗಳಿ, ಜನವಾಡ, ಕಲ್ಲೋಳ ಹಾಗೂ ಅಂಕಲಿ ಗ್ರಾಮಗಳ ಶಾಲೆಗಳಿಗೆ ಇಂದು ಮತ್ತು ನಾಳೆ ರಜೆ ಘೋಷಿಸಿ ಜಿಲ್ಲಾಧಿಕಾರಿ ಮೊಹಮ್ಮದ್ ರೋ ನ್ ಆದೇಶ ಹೊರಡಿಸಿದ್ದಾರೆ

*******

ಇಂದು ಅಂತಾರಾಷ್ಟ್ರೀಯ ಹುಲಿ ದಿನ. ಹುಲಿಗಳ ಸಂರಕ್ಷಣೆ ಮತ್ತು ಅವುಗಳ ನೈಸರ್ಗಿಕ ಆವಾಸ ಸ್ಥಾನಗಳನ್ನು ರಕ್ಷಿಸುವ ಅಗತ್ಯತೆಯ ಬಗ್ಗೆ ಜಾಗೃತಿ ಮೂಡಿಸಲು ಈ ದಿನ ಸಮರ್ಪಿತವಾಗಿದೆ. ಭಾರತದಲ್ಲಿ ಹುಲಿಗಳ ಸಂಖ್ಯೆಯಲ್ಲಿ ಪ್ರತಿ ವ ್ಷ ಹೆಚ್ಚಳವಾಗುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಮನ್ ಕಿ ಬಾತ್‌ನಲ್ಲಿ ಹುಲಿ ದಿನದ ಕುರಿತು ಉಲ್ಲೇಖಿಸಿರುವ ಅವರು, ಜಗತ್ತಿನಲ್ಲಿರುವ ಹುಲಿಗಳ ಸಂಖ್ಯೆಯ ಪೈಕಿ ಶೇಕಡಾ 70 ರ ್ಟು ಹುಲಿಗಳು ನಮ್ಮ ದೇಶದಲ್ಲಿವೆ. ಹುಲಿಗಳು ನಮ್ಮ ಸಂಸ್ಕೃತಿಯ ಅವಿಭಾಜ್ಯ ಅಂಗವಾಗಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

ಧ್ವನಿ – ಪ್ರಧಾನಿ ( 32 ಸೆಕೆಂದುಗಳು)

*******

ಸಂವಿಧಾನದ ಆಶಯವೇ ಪತ್ರಿಕಾ ರಂಗದ ಆಶಯವಾಗಿದ್ದು, ಇದರ ಆಧಾರದ ಮೇಲೆ ಪ್ರಜಾಪ್ರಭುತ್ವ ವ್ಯವಸ್ಥೆ ಇದೆ ಎಂದು ಸಣ್ಣ ನೀರಾವರಿ ಮತ್ತು ವಿಜ್ಞಾನ ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್.ಭೋಸರಾಜು ಹೇಳಿದ್ದಾರೆ.ರಾಯಚೂರಿನಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ದೇಶದ ವಿದ್ಯಮಾನಗಳನ್ನು ತಿಳಿಯಲು ಪ್ರತಿಯೊಬ್ಬರಿಗೂ ವರ್ತಮಾನ ಪತ್ರಿಕೆಗಳ ಅವಶ್ಯಕತೆ ಇದೆ. ಆ ದೆಸೆಯಲ್ಲಿ ತನ್ನದೇ ಆದ ಇತಿಹಾಸ ಹೊಂದಿದೆ. ಜಿಲ್ಲೆಯಲ್ಲಿ ಪರ್ತಕರ್ತರ ವಾಹನ ಮತ್ತು ಅಧಿಕಾರಿಯ ನಿಯೋಜನೆ ಮಾಡುವಂತೆ ವಾರ್ತಾ ಇಲಾಖೆಯ ಆಯುಕ್ತರೊಂದಿಗೆ ಚರ್ಚಿಸುವುದಾಗಿ ಹೇಳಿದರು.

*******